RNU AIR DHARWAD

**JANUARY 16, 2025**

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- ಉಪ ರಾಷ್ಟ್ರಪತಿ ಜಗದೀಪ ಧನಕರ್, ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ಅಮೃತ ಮಹೋತ್ಸವದಲ್ಲಿ, ಇಂದು ಭಾಗಿ.
- ಭಕ್ತಾದಿಗಳ ಶ್ರದ್ಧಾ, ಭಕ್ತಿಯ ನಡುವೆ, ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಮಹಾ ರಥೋತ್ಸವ.
- ‘ಆದಿಕವಿ ಮಹರ್ಷಿ ವಾಲ್ಮೀಕಿ’ ಧ್ಯೇಯದೊಂದಿಗೆ, ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಇಂದಿನಿಂದ, ಫಲಪುಷ್ಪ ಪ್ರದರ್ಶನ.
- ದಕ್ಷಿಣ ಕೋರಿಯಾದ, ಲೀಥಿಯಂ ಬ್ಯಾಟರಿ ಉತ್ಪಾದನಾ ಘಟಕ, ಬೆಂಗಳೂರಿನಲ್ಲಿ ಸ್ಥಾಪನೆ.

<><><>

**ಈಗ ವಾರ್ತೆಗಳ ವಿವರ**

<><><>

ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ಅಮೃತ ಮಹೋತ್ಸವ ಮತ್ತು ಹಿರಿಯ ವಿದ್ಯಾರ್ಥಿಗಳ ಸಮ್ಮಿಲನ ಸಮಾರಂಭ, ಇಂದು ಮತ್ತು ನಾಳೆ, ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಜರುಗಲಿದೆ. ಇಂದು ಬೆಳಗ್ಗೆ 11 ಗಂಟೆಗೆ ಉಪ ರಾಷ್ಟ್ರಪತಿ ಜಗದೀಪ ಧನಕರ್ ಸಮಾರಂಭವನ್ನು ಉದ್ಘಾಟಿಸುವರು. ರಾಜ್ಯಪಾಲ ಥಾವರಚಂದ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದು, ಎರಡು ದಿನ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

<><><>

ರಾಷ್ಟ್ರೀಯ ಶಿಕ್ಷಣ ನೀತಿ – 2020ರ ಅಡಿ, ವಿದ್ಯಾರ್ಥಿಗಳಿಗೆ ದೇಶದಾದ್ಯಂತ ಏಕರೂಪದ ‘ಅಪಾರ್’ ವಿಶಿಷ್ಟ ಗುರುತಿನ ಚೀಟಿ ನೀಡಲು, ಕೇಂದ್ರ ಸರ್ಕಾರ ಯೋಜಿಸಿದೆ. ‘ಅಪಾರ್’ ಗುರುತಿನ ಚೀಟಿಯ ಮಹತ್ವ ಹಾಗೂ ನೋಂದಣಿ ಪ್ರಕ್ರಿಯೆ

ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಶಿರಸಿ ಶೈಕ್ಷಣಿಕ ಜಿಲ್ಲೆಯ, ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಪಿ.ಬಸವರಾಜ.

<><><>

ಪಿ.ಬಸವರಾಜ ಧ್ವನಿ 50 ಸೆಕೆಂದುಗಳು

<><><>

ದಕ್ಷಿಣ ಭಾರತದ ಕುಂಭ ಮೇಳವೆಂದೇ ಖ್ಯಾತಿವೆತ್ತ, ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಮಹಾ ರಥೋತ್ಸವ, ಭಕ್ತಾದಿಗಳ ಸಂಭ್ರಮ, ಸಡಗರ ಹಾಗೂ ಶ್ರದ್ಧೆಯ ಮಧ್ಯೆ, ಜರುಗಿತು. ಖ್ಯಾತ ಗಾಯಕ ಪಂಡಿತ ಎಂ. ವೆಂಕಟೇಶಕುಮಾರ ಚಾಲನೆ ನೀಡಿದರು. ತುಮಕೂರು ಶ್ರೀ ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ಸಾನಿಧ್ಯವಹಿಸಿದ್ದರು.

<><><>

ವಿಧಾನಸಭೆ ವಿಪಕ್ಷ ಉಪ ನಾಯಕ, ಅರವಿಂದ ಬೆಲ್ಲದ ಅವರು, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ, ಸಾಮಾನ್ಯವಾಗಿ ಜಾತ್ರೆಯಲ್ಲಿ ದೇವರ ದರ್ಶನ, ರಥೋತ್ಸವ, ಮನೋರಂಜನೆ ಕಾರ್ಯಕ್ರಮಗಳಲ್ಲಿ ಲಕ್ಷಾಂತರ ಜನರು ಭಾಗಿಯಾಗಿ ಸಂತಸ ಪಡುತ್ತಾರೆ. ಆದರೆ, ಜಾಗೃತಿ ಮೂಡಿಸಲು ಅರ್ಥಪೂರ್ಣವಾದ ಜಾತ್ರೆಯನ್ನು ಆಯೋಜಿಸುವುದು, ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಮಠ ಮಾತ್ರ ಎಂಬುದು, ಕರ್ನಾಟಕಕ್ಕೆ ಹೆಮ್ಮೆಯ ಸಂಗತಿ ಎಂದಿದ್ದಾರೆ.

<><><>

ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿಯವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಜಾತ್ರೆಯಲ್ಲಿ, ಲಕ್ಷಾಂತರ ಭಕ್ತಾದಿಗಳು ಪಾಲ್ಗೊಂಡಿದ್ದಾರೆ.

<><><>

ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲೂಕು, ವರೂರು ಗ್ರಾಮದ, ನವಗ್ರಹ ತೀರ್ಥ ಕ್ಷೇತ್ರದಲ್ಲಿ, ಪಂಚ ಕಲ್ಯಾಣ ಮಹೋತ್ಸವವನ್ನು ಉದ್ಘಾಟಿಸಿದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, 405 ಅಡಿ ಎತ್ತರದ, ಸುಮೇರು ಪರ್ವತವನ್ನು ಲೋಕಾರ್ಪಣೆಗೊಳಿಸಿದರು. ಶ್ರೀ ಗುಣಧರ ನಂದಿ ಆಚಾರ್ಯರು ಸಾನಿಧ್ಯ ವಹಿಸಿದ್ದರು. ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಮಹಾ ಮಸ್ತಕಾಭಿ ೇಕದಲ್ಲಿ ಪಾಲ್ಗೊಂಡರು.

<><><>

ಜಾತಿ ಗಣತಿ ವರದಿಯ ಅಂಕಿ–ಅಂಶ ಗೋಪ್ಯವಾಗಿದ್ದು, ಸಾರ್ವಜನಿಕವಾಗಿ ಪ್ರಕಟಗೊಳಿಸಿಲ್ಲ; ಇಂದಿನ ಸಚಿವ ಸಂಪುಟ ಸಭೆಯ ಚರ್ಚಾ ವಿಷಯಗಳ ಆದ್ಯತಾ ಪಟ್ಟಿಯಲ್ಲಿ, ಈ ವಿಷಯವಿಲ್ಲ; ಮುಂದಿನ ಸಂಪುಟ ಸಭೆಯಲ್ಲಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಪಡಿಸಿದ್ದಾರೆ. ಹೊಸ ದಿಲ್ಲಿಯಲ್ಲಿ, ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಅವರು, ಕಿಯೋನಿಕ್ಸ್ ಅಸೋಸಿಯೇ ್ನ್ ಬಾಕಿ ಪಾವತಿಸಲು ಆಗ್ರಹಿಸಿ, ರಾಜ್ಯಪಾಲರಿಗೆ ದೂರು ನೀಡಿದೆ. ಹಿಂದಿನ ಬಿಜೆಪಿ ಸರ್ಕಾರ ಇದಕ್ಕೆ ಹೊಣೆ. ಆದರೆ ಹಂತ ಹಂತವಾಗಿ ಬಾಕಿ ಹಣ ಪಾವತಿಸಲು ಕ್ರಮ ಕೈಗೊಳ್ಳುವುದಾಗಿ, ಮುಖ್ಯಮಂತ್ರಿ ನುಡಿದರು.

<><><>

ಮೈಸೂರಿನ ಮುಡಾ ನಿವೇಶನ ಹಗರಣದಲ್ಲಿ, ಸರಿ ಸುಮಾರು 5 ಸಾವಿರ ಕೋಟಿ ರೂಪಾಯಿ ಮೌಲ್ಯದ ್ವ ಅವ್ಯವಹಾರ ನಡೆದಿದೆ; ಮುಡಾ ಪ್ರಕರಣವನ್ನು ಸಿ.ಬಿ.ಐ. ತನಿಖೆಗೆ ಒಪ್ಪಿಸುವುದು ಅಗತ್ಯ ಎಂದು, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ 14 ನಿವೇಶನಗಳನ್ನು ಮುಡಾಗೆ ಹಿಂತಿರುಗಿಸಿದ್ದಾರೆ. ಆದರೆ ಕಳಂಕದಿಂದ ಮುಕ್ತರಾದಂತಲ್ಲ ಎಂದು ತಿಳಿಸಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ **x** ಖಾತೆ **@airnews_dharwad** ಹಾಗೂ

ನಮ್ಮ ಫೇಸ್ಬುಕ್ ಖಾತೆ **Airrnu Dharwad** ಅನುಸರಿಸಿ.

<><><>

ಗಣರಾಜ್ಯೋತ್ಸವದ ಅಂಗವಾಗಿ, ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಇಂದಿನಿಂದ, ಈ ತಿಂಗಳ 27ರ ತನಕ, ‘ಆದಿಕವಿ ಮಹರ್ಷಿ ವಾಲ್ಮೀಕಿ’ ಧ್ಯೇಯದೊಂದಿಗೆ, ಗಣರಾಜ್ಯೋತ್ಸವದ ಅಂಗವಾಗಿ, 217ನೇ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಆಯೋಜಿತ, ಫಲಪುಷ್ಪ ಪ್ರದರ್ಶನದಲ್ಲಿ, ಇಕೇಬಾನ, ಜಾನೂರು, ಥಾಯ್ ಆರ್ಟ್ ಸೇರಿದಂತೆ, ಇನ್ನಿತರ ಕಲಾ ಪ್ರದರ್ಶನಗಳನ್ನು, ಲಾಲ್‌ಬಾಗ್ ನ ಗಾಜಿನ ಮನೆಯಲ್ಲಿ ಅಣಿಗೊಳಿಸಲಾಗಿದೆ. ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ತೋಟಗಾರಿಕೆ ಇಲಾಖೆ, ಬೆಂಗಳೂರು ವಲಯದ ಉಪ ನಿರ್ದೇಶಕ, ಬಿ.ಟಿ. ಬಾಲಕೃಷ್ಣ.

<><><>

ಬಿ.ಟಿ. ಬಾಲಕೃಷ್ಣ ಧ್ವನಿ 30 ಸೆಕೆಂದುಗಳು

<><><>

ದಕ್ಷಿಣ ಕೊರಿಯಾದ, ಇಂಟರ್ ನ್ಯಾ ’ನಲ್ ಬ್ಯಾಟರಿ – ಐಬಿಸಿ ಕಂಪೆನಿ, ಭಾರತದಲ್ಲಿ ಇದೇ ಮೊದಲ ಬಾರಿಗೆ, ತನ್ನ ಲೀಥಿಯಂ ಬ್ಯಾಟರಿ ಉತ್ಪಾದನಾ ಘಟಕವನ್ನು ಕರ್ನಾಟಕದಲ್ಲಿ ಆರಂಭಿಸುತ್ತಿದೆ. ಹಸಿರು ಇಂಧನ ಕ್ಷೇತ್ರದಲ್ಲಿ ಈ ಹೆಜ್ಜೆ ತುಂಬ ಮಹತ್ತರವಾದುದು; ಆಧುನಿಕ ತಯಾರಿಕಾ ಕೌಶಲದಿಂದಾಗಿ, ಸ್ಥಳೀಯ ಹಲವು ಕ್ಷೇತ್ರಗಳಿಗೆ ಪ್ರೋತ್ಸಾಹ ದೊರಕಲಿದೆ ಎಂದು, ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿಯ ಕೈಗಾರಿಕಾ ಪ್ರದೇಶದಲ್ಲಿ, ವಿದ್ಯುತ್ ಚಾಲಿತ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ ಬೇಕಾಗುವ, ಲೀಥಿಯಂ–ಅಯಾನ್ ಬ್ಯಾಟರಿಗಳನ್ನು ತಯಾರಿಸುವ ಘಟಕಕ್ಕೆ, ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದರು. 10 ಎಕರೆ ಜಾಗ ನೀಡಿದ್ದು, ಫಾಕ್ಸ್–ಕಾನ್ ಸಂಸ್ಥೆಯ ಸಮೀಪದಲ್ಲೇ ಮುಂದಿನ ಒಂಬತ್ತು ತಿಂಗಳಲ್ಲಿ ನೂತನ ಘಟಕ ಕಾರ್ಯಾಚರಣೆ ಆರಂಭಿಸಲಿದೆ. 390 ಕೋಟಿ ರೂಪಾಯಿ ಹೂಡಿಕೆ ಮಾಡಲಿದ್ದು, ಸಾವಿರಾರು ಯುವಜನರಿಗೆ ಉದ್ಯೋಗಗಳು ದೊರೆಯಲಿವೆ ಎಂದರು.

<><><>

ಕೇಂದ್ರದ “ಸಖಿ ಒನ್ ಸ್ಟಾಪ್ ಸೆಂಟರ್”"ನ್ನು, ಕಲಬುರಗಿ ನಗರದ ಪ್ರಗತಿ ಕಾಲೋನಿಯ, ಬಾಲಕರ ಬಾಲ ಮಂದಿರದಲ್ಲಿ ಪ್ರಾರಂಭಿಸಲಾಗಿದೆ. “ಸಖಿ ಒನ್ ಸ್ಟಾಫ್ ಸೆಂಟರ್”ನ ಮಹಿಳಾ ಉಚಿತ ಸಹಾಯವಾಣಿ, 181 ಕ್ಕೆ ಕರೆ ಮಾಡಿ, ಲೈಂಗಿಕ ದೌರ್ಜನ್ಯ, ಕೌಟುಂಬಿಕ ಹಿಂಸೆ ಹಾಗೂ ಇತರೆ ಸಂಕಷ್ಟದಲ್ಲಿರುವ ಮಹಿಳೆಯರು, ದಿನದ 24 ಗಂಟೆ ತುರ್ತು ಸಹಾಯ ಪಡೆಯಬಹುದು ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ. ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ತುರ್ತು ಸೇವೆಗಳಾದ, ಉಚಿತ ವೈದ್ಯಕೀಯ ನೆರವು, ಆಪ್ತ ಸಮಾಲೋಚನೆ, ಪೊಲೀಸ್ ಸಹಾಯ ಹಾಗೂ ತಾತ್ಕಾಲಿಕ ಸುರಕ್ಷತೆಯ ವಸತಿ ಕಲ್ಪಿಸಲಾಗುತ್ತದೆ.

<><><>

ಚಿಕ್ಕಮಗಳೂರು ಜಿಲ್ಲೆ, ಖಾಂಡ್ಯ ಹೋಬಳಿಯ, ಮತ್ತಿಖಂಡ ಗ್ರಾಮದ, 25 ವರ್ಷದ ಯುವಕನಲ್ಲಿ, ಕ್ಯಾಸನೂರು ಮಂಗನ ಕಾಯಿಲೆಯ ಸೋಂಕು ಕಾಣಿಸಿಕೊಂಡಿದೆ. ಕೊಪ್ಪ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಜಿಲ್ಲೆಯ ಕೊಪ್ಪ, ಶೃಂಗೇರಿ, ಎನ್.ಆರ್. ಪುರ ತಾಲೂಕುಗಳ ಅರಣ್ಯದಂಚಿನ ಗ್ರಾಮಗಳ ಮನೆ ಮನೆಗೆ ತೆರಳಿ, ಆರೋಗ್ಯ ಇಲಾಖೆ ಸಿಬ್ಬಂದಿ ಜನ ಜಾಗ್ರತಿ ಮೂಡಿಸುತ್ತಿದ್ದಾರೆ. ಆರೋಗ್ಯ ಇಲಾಖೆ ಮುಂಜಾಗ್ರತೆ ವಹಿಸಿದೆ.

<><><>

ಖ್ಯಾತ ರುದ್ರ ವೀಣಾ ವಾದಕ ನಾದಯೋಗಿ, ದತ್ತಾತ್ರಯ ರಾಮರಾವ ಪರ್ವತಿಕರ ಅವರ 108ನೇ ಜನ್ಮದಿನಾಚರಣೆ ಇಂದು. ಇಂದು ಸಂಜೆ ಅವರ ಹುಟ್ಟೂರಾದ, ಬಾಗಲಕೋಟೆ ಜಿಲ್ಲೆ, ಗುಳೇದಗುಡ್ಡದ ರಾವಜಿವಾಡಾದಲ್ಲಿ, 'ಸ್ವರಾಂಜಲಿ' ಸಂಗೀತ ಕಾರ್ಯಕ್ರಮ ಜರುಗಲಿದೆ. ಭಾರತೀಯ ಸಂಗೀತಕ್ಕೆ 'ದತ್ತಾತ್ರೇಯ ವೀಣಾ' ಅವರ ಕೊಡುಗೆಯಾಗಿದೆ.

<><><>

ಬಳ್ಳಾರಿಯ ಕ್ರೀಡಾ ವಸತಿ ಶಾಲೆಗೆ, ಪ್ರಸಕ್ತ ಶೈಕ್ಷಣಿಕ ಸಾಲಿನ, ಪ್ರತಿಭಾವಂತ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ, ಈ ತಿಂಗಳ 27 ಹಾಗೂ 28 ರಂದು ನಡೆಯಲಿದೆ. 7 ಮತ್ತು 10ನೇ ತರಗತಿ ವ್ಯಾಸಂಗ ಮಾಡುತ್ತಿರುವ ಕ್ರೀಡಾಪಟುಗಳು, ಅಥ್ಲೆಟಿಕ್ಸ್, ಹಾಕಿ, ಬಾಸ್ಕೆಟ್‌ಬಾಲ್, ವಾಲಿಬಾಲ್ ಮತ್ತು ಫುಟ್ಬಾಲ್ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಬಳ್ಳಾರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ ಎಂದು, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಗ್ರೇಸಿ ತಿಳಿಸಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಕನ್ನಡ ಚಿತ್ರರಂಗದ ಹಿರಿಯ ನಟ ಸರಿಗಮ ವಿಜಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿನ್ನೆ ನಿಧನರಾದರು. ಅವರಿಗೆ 76 ವರ್ಷ ವಯಸ್ಸಾಗಿತ್ತು. ಇಂದು ಚಾಮರಾಜಪೇಟೆಯ, ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

<><><>

ಕೇಂದ್ರ ಗೃಹ ಖಾತೆ ಸಚಿವ ಅಮಿತ್ ಶಾ, ಇಂದು ಬೆಂಗಳೂರು ವಿಮಾನ ನಿಲ್ದಾಣದ, ಫಾಸ್ಟ್ ಟ್ರ್ಯಾಕ್ ಇಮಿಗ್ರೇ 'ನ್, ಟ್ರಸ್ಟೆಡ್ ಟ್ರಾವೆಲರ್ ಪ್ರೋಗ್ರಾಮ್ – ಉದ್ಘಾಟಿಸಲಿದ್ದಾರೆ.

<><><>

ಅಖಿಲ ಭಾರತ ಕಾಂಗ್ರೆಸ್ ಪಕ್ಷದ, ನೂತನ ಕೇಂದ್ರ ಕಚೇರಿಯನ್ನು, ಹೊಸ ದಿಲ್ಲಿಯಲ್ಲಿ ಕಾಂಗ್ರೆಸ್ ಸಂಸದೀಯ ಮಂಡಳಿ ಅಧ್ಯಕ್ಷೆ, ಸೋನಿಯಾ ಗಾಂಧಿ ಉದ್ಘಾಟಿಸಿದರು. ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡಿದ್ದರು.

<><><>

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ, 45 ದಿನಗಳ ಮಹಾ ಕುಂಭಮೇಳದ ಮೂರನೇ ದಿನವಾದ ನಿನ್ನೆ, ತ್ರಿವೇಣಿ ಸಂಗಮದಲ್ಲಿ ಲಕ್ಷಾಂತರ ಭಕ್ತರು ಪುಣ್ಯ ಸ್ನಾನ ಕೈಗೊಂಡರು.

<><><>

ಭಾರತೀಯ ಹವಾಮಾನ ಇಲಾಖೆ ಕಾರ್ಯಾರಂಭಿಸಿ, 150ನೇ ವ ರ್ಷಾಚರಣೆ ಕಾರ್ಯಕ್ರಮ, ಕಾರವಾರದ ಜಿಲ್ಲಾ ಹವಾಮಾನ ಇಲಾಖೆ ಕಚೇರಿಯಲ್ಲಿ ನಡೆಯಿತು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಉಪ ರಾಷ್ಟ್ರಪತಿ ಜಗದೀಪ ಧನಕರ್, ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ಅಮೃತ ಮಹೋತ್ಸವದಲ್ಲಿ, ಇಂದು ಭಾಗಿ.
- ಭಕ್ತಾದಿಗಳ ಶ್ರದ್ಧಾ, ಭಕ್ತಿಯ ನಡುವೆ, ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಮಹಾ ರಥೋತ್ಸವ.
- ‘ಆದಿಕವಿ ಮಹರ್ಷಿ ವಾಲ್ಮೀಕಿ’ ಧ್ಯೇಯದೊಂದಿಗೆ, ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಇಂದಿನಿಂದ, ಫಲಪು ್ಪ ಪ್ರದರ್ಶನ.
- ದಕ್ಷಿಣ ಕೋರಿಯಾದ, ಲೀಥಿಯಂ ಬ್ಯಾಟರಿ ಉತ್ಪಾದನಾ ಘಟಕ, ಬೆಂಗಳೂರಿನಲ್ಲಿ ಸ್ಥಾಪನೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>